**Akashvani: Bangalore**
**Regional Bulletin In Kannada**
**29.01.2026 : 14.30hrs**

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**29.01.2026 : 14.30hrs**

*********

**ಮುಖ್ಯಾಂಶಗಳು :**

1. ರಾಜ್ಯಪಾಲರ ಕಚೇರಿಯ ದೂರವಾಣಿ ಕರೆಗಳನ್ನು ಸರ್ಕಾರ ಕದ್ದಾಲಿಸಿಲ್ಲ - ಗೃಹ ಸಚಿವ ಡಾ. ಜಿ. ಪರಮೇಶ್ವರ್ ಸ್ಪಷ್ಟನೆ
2. ಸರ್ಕಾರಿ ವೈದ್ಯರು ಖಾಸಗಿಯಾಗಿ ಚಿಕಿತ್ಸೆ ನೀಡುವುದು ನಿಷೇಧ; ವಿಧಾನಸಭೆಗೆ ಸಚಿವ ದಿನೇಶ್ ಗುಂಡೂರಾವ್ ಮಾಹಿತಿ
3. ವಿಕಲಚೇತನರಿಗೆ ಉದ್ಯೋಗಾವಕಾಶ ಕಲ್ಪಿಸಲು ಬೃಹತ್ ಉದ್ಯೋಗ ಮೇಳ ನಡೆಸಲು ಸರ್ಕಾರ ನಿರ್ಧಾರ
4. ವಿಧಾನಪರಿಷತ್ ಕಲಾಪದಲ್ಲಿ ಆಡಳಿತ, ಪ್ರತಿಪಕ್ಷಗಳಿಂದ ವಾಗ್ವಾದ; ಸದನ ಮುಂದೂಡಿದ ಸಭಾಪತಿ
5. ಕಾರ್ಮಿಕ ಮುಖಂಡ ಅನಂತ ಸುಬ್ಬರಾವ್ ನಿಧನ; ಅಂತಿಮ ದರ್ಶನ ಪಡೆದ ಮುಖ್ಯಮಂತ್ರಿ ಸಿದ್ದರಾಮಯ್ಯ

*********

ರಾಜ್ಯಪಾಲರ ಕಚೇರಿಯ ದೂರವಾಣಿ ಕರೆಗಳನ್ನು ಸರ್ಕಾರ ಎಂದಿಗೂ ಕದ್ದಾಲಿಸಿಲ್ಲ ಎಂದು ಗೃಹ ಸಚಿವ ಡಾ. ಜಿ. ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸರ್ಕಾರಕ್ಕೆ ಅದರ ಅಗತ್ಯವೂ ಇಲ್ಲ ಎಂದು ತಿಳಿಸಿದ್ದಾರೆ. ಬಿಜೆಪಿ ಅಧಿಕಾರದಲ್ಲಿದ್ದಾಗ ಮಾಡಿದ್ದನ್ನು ಆಧರಿಸಿ ಆರೋಪಗಳನ್ನು ಮಾಡುತ್ತಿದೆ ಎಂದು ದೂರಿದ್ದಾರೆ. ಇದೇ ವೇಳೆ ಒಂದು ವರ್ಷದ ಅವಧಿಯಲ್ಲಿ ಪೊಲೀಸ್ ಇನ್ಸ್‌ಪೆಕ್ಟರ್‌ಗಳನ್ನು ವರ್ಗಾವಣೆ ಮಾಡುವ ಬೇಡಿಕೆಗೆ ಸಂಬಂಧಿಸಿದಂತೆ ಪ್ರತಿಕ್ರಿಯಿಸಿದ ಅವರು, ಪರಿಣಾಮಕಾರಿಯಾಗಿ ಕೆಲಸ ಮಾಡಲು ವಿಫಲರಾದ ಇನ್ಸ್‌ಪೆಕ್ಟರ್‌ಗಳನ್ನು ಎರಡು ವರ್ಷಗಳ ಸೇವೆಯ ಬಳಿಕ ವರ್ಗಾವಣೆ ಮಾಡಲಾಗುವುದು ಎಂದು ತಿಳಿಸಿದ್ದಾರೆ.

*********

ಸರ್ಕಾರಿ ಸೇವೆ ಸಲ್ಲಿಸುವ ವೈದ್ಯರು ಖಾಸಗಿಯಾಗಿ ಒಳ ರೋಗಿಗಳಿಗೆ ಚಿಕಿತ್ಸೆ ನೀಡುವುದನ್ನು ನಿಷೇಧಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ವಿಧಾನಸಭೆಯಲ್ಲಿ ತಿಳಿಸಿದ್ದಾರೆ. ಪ್ರಶ್ನೋತ್ತರ ಕಲಾಪದಲ್ಲಿ ಕಾಂಗ್ರೆಸ್ ಸದಸ್ಯ ಶಿವಲಿಂಗೇಗೌಡ ಪ್ರಶ್ನೆಗೆ ಉತ್ತರಿಸಿದ ಅವರು, ಸರ್ಕಾರಿ ವೈದ್ಯರು ತಮ್ಮ ಕೆಲಸದ ಬಳಿಕ ಖಾಸಗಿಯಾಗಿ ಸೇವೆ ಸಲ್ಲಿಸುವುದರಿಂದ ಸರ್ಕಾರಿ ಆಸ್ಪತ್ರೆಗೆ ದಾಖಲಾದ ಒಳ ರೋಗಿಗಳಿಗೆ ತೊಂದರೆಯಾಗುತ್ತದೆ. ಇದನ್ನು ಮನಗಂಡ ಸರ್ಕಾರ ಈ ನಿರ್ಧಾರ ಕೈಗೊಂಡಿದೆ ಎಂದು ಸಮರ್ಥಿಸಿಕೊಂಡಿದ್ದಾರೆ. ಗ್ರಾಮೀಣ ಪ್ರದೇಶಗಳ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿಯಿರುವ ತಜ್ಞ ವೈದ್ಯರು ಮತ್ತು ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಜಿಲ್ಲಾಧಿಕಾರಿಗಳ ಹಂತದಲ್ಲಿ ನಿಯಮಾನುಸಾರ ಭರ್ತಿ ಮಾಡಲು ಅನುಮತಿ ನೀಡಲಾಗಿದೆ ಎಂದು ಹೇಳಿದ್ದಾರೆ. ಸರ್ಕಾರದ ಕೋಟಾದಡಿ ವ್ಯಾಸಂಗ ಪೂರೈಸಿದ ವೈದ್ಯರಿಗೆ ಒಂದು ವರ್ಷದ ಕಡ್ಡಾಯ ವೈದ್ಯಕೀಯ ಸರ್ಕಾರಿ ಸೇವೆಯಲ್ಲಿ ನೇಮಕ ಮಾಡುವ ಮೂಲಕ ವೈದ್ಯರ ಕೊರತೆ ನಿವಾರಿಸಲು ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

*********

ರಾಜ್ಯದಲ್ಲಿ ವಿಕಲಚೇತನರಿಗೆ ಉದ್ಯೋಗಾವಕಾಶ ಕಲ್ಪಿಸುವ ಉದ್ದೇಶದಿಂದ ಮುಂದಿನ ಮೂರು ತಿಂಗಳಲ್ಲಿ ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿ ಬೃಹತ್ ಉದ್ಯೋಗ ಮೇಳ ನಡೆಸಲಾಗುವುದು ಎಂದು ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವ ಡಾ ಶರಣಪ್ರಕಾಶ್ ಆರ್. ಪಾಟೀಲ್ ಹೇಳಿದ್ದಾರೆ. ಶಾಸಕ ಗುರುರಾಜ್ ಗಂಟಿಹೊಳೆ ಪ್ರಶ್ನೆಗೆ ಉತ್ತರಿಸಿದ ಅವರು, ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ವತಿಯಿಂದ ಮುಖ್ಯಮಂತ್ರಿಯವರ ಕೌಶಲ್ಯ ಕರ್ನಾಟಕ ಯೋಜನೆಯಡಿ ವಿಕಲಚೇತನರಿಗೆ ಶೇಕಡಾ ೩ರಿಂದ ೫ಕ್ಕೆ ಮೀಸಲಾತಿ ಹೆಚ್ಚಿಸಲಾಗಿದೆ. ೨೦೨೪-೨೫ ರಲ್ಲಿ ೫೪೦ ಅಭ್ಯರ್ಥಿಗಳಿಗೆ ತರಬೇತಿ ನೀಡಲಾಗಿದ್ದು ಅವರಲ್ಲಿ ೮೩ ಮಂದಿ ಉದ್ಯೋಗ ಪಡೆಯುವಲ್ಲಿ ಯಶಸ್ವಿಯಾಗಿದ್ದಾರೆ.

*********

ವಿಧಾನಪರಿಷತ್‌ನಲ್ಲಿಂದು ಕಲಾಪ ಆರಂಭಗೊಳ್ಳುತ್ತಿದ್ದಂತೆಯೇ ಸದನದ ಬಾವಿಗಿಳಿದು ಪ್ರತಿಪಕ್ಷ ಸದಸ್ಯರು ಧರಣಿ ಮುಂದುವರಿಸಿ, ರಾಜ್ಯಪಾಲರ ಭಾಷಣಕ್ಕೆ ನಿಂದನೆ ಮಾಡಿರುವುದು ಹಾಗೂ ವಂದನಾ ನಿರ್ಣಯಕ್ಕೆ ಮುಂದಾದ ಆಡಳಿತ ಪಕ್ಷ ವಿಷಾದ ವ್ಯಕ್ತಪಡಿಸಬೇಕು ಎಂದು ಪಟ್ಟು ಹಿಡಿದರು. ಈ ಹಂತದಲ್ಲಿ ಮಧ್ಯಪ್ರವೇಶಿಸಿದ ಆಡಳಿತ ಪಕ್ಷದ ಮುಖ್ಯ ಸಚೇತಕ ಸಲೀಂ ಅಹಮದ್ ಸದನದಲ್ಲಿ ನಿಯಮ ಪುಸ್ತಕ ಹರಡಿ ಅವಮಾನ ಮಾಡಲಾಗಿದೆ. ಇದು ಇಡೀ ವ್ಯವಸ್ಥೆಗೆ ಮಾಡಿದ

ಅಗೌರವವಾಗಿದ್ದು, ವಿಪಕ್ಷ ನಾಯಕರ ಮೇಲೆ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದರು. ಇದಕ್ಕೆ ಸದಸ್ಯ ಬಿ.ಕೆ. ಹರಿಪ್ರಸಾದ್ ಸೇರಿದಂತೆ ಪ್ರಮುಖರು ದನಿಗೂಡಿಸಿದರು. ಈ ಹಿನ್ನೆಲೆಯಲ್ಲಿ ಸದನದಲ್ಲಿ ಕೋಲಾಹಲದ ವಾತಾವರಣ ನಿರ್ಮಾಣಗೊಂಡ ಹಿನ್ನೆಲೆಯಲ್ಲಿ ಸಭಾಪತಿ ಬಸವರಾಜ ಹೊರಟ್ಟಿ ಸದನವನ್ನು ಹತ್ತು ನಿಮಿಷಗಳ ಕಾಲ ಮುಂದೂಡಿದರು.

*********

ಕೇಂದ್ರ ಸರ್ಕಾರದ ಜನಪರ ಯೋಜನೆಗಳ ಕಾರ್ಯಗತಕ್ಕೆ ರಾಜ್ಯ ಸರ್ಕಾರ ಅಡ್ಡಿಪಡಿಸುತ್ತಿದ್ದು, ಜನವಿರೋಧಿ ನೀತಿ ಅನುಸರಿಸುತ್ತಿದೆ ಎಂದು ಮೈಸೂರು ಕೊಡಗು ಸಂಸದ ಯದುವೀರ್ ಒಡೆಯರ್ ಆರೋಪಿಸಿದ್ದಾರೆ. ಮಡಿಕೇರಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜೀರಾಮ್ ಜಿ ಯೋಜನೆ ದೇಶದ ಗ್ರಾಮಪಂಚಾಯತ್‌ಗಳಿಗೆ ಮತ್ತಷ್ಟು ಅಧಿಕಾರ, ಬಲ ನೀಡಲಿದೆ. ಈ ಯೋಜನೆಯಿಂದ ಕೇಂದ್ರ ಸರ್ಕಾರಕ್ಕೆ ಖ್ಯಾತಿ ದೊರಕಲಿದೆ ಎಂಬ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ವಿರೋಧ ವ್ಯಕ್ತಪಡಿಸುತ್ತಿದೆ ಎಂದು ತಿಳಿಸಿದ್ದಾರೆ. ವಿಕಸಿತ ಭಾರತ ಎಂಬ ಪರಿಕಲ್ಪನೆಯೇ ಗ್ರಾಮಸ್ವರಾಜ್ ಬಗೆಗಿನ ಗಾಂಧೀಜಿ ಕನಸಾಗಿದೆ ಎಂದು ಹೇಳಿದ್ದಾರೆ.

*********

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ನಿನ್ನೆ ನಿಧನ ಹೊಂದಿದ ಕಾರ್ಮಿಕ ಮುಖಂಡ ಅನಂತ ಸುಬ್ಬರಾವ್ ಅವರ ಪಾರ್ಥಿವ ಶರೀರದ ಅಂತಿಮ ದರ್ಶನ ಪಡೆದರು. ಇದೇ ವೇಳೆ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅನಂತ್ ಸುಬ್ಬರಾವ್ ಅವರು ಕಾರ್ಮಿಕರ ಧ್ವನಿಯಾಗಿದ್ದರು. ಬಹಳಷ್ಟು ಕಾರ್ಮಿಕ ಹೋರಾಟಗಳನ್ನು ಮಾಡಿದ್ದರು ಎಂದು ಸ್ಮರಿಸಿದ್ದಾರೆ. ಅವರ ನಿಧನದಿಂದ ಸಾರ್ವಜನಿಕವಾಗಿ ಬಹಳ ನಷ್ಟವಾಗಿದೆ. ಕೊನೆ ಉಸಿರುವವರೆಗೂ ಕಾರ್ಮಿಕರ ಪರ ಹೋರಾಟ ನಡೆಸಿದ್ದರು ಎಂದು ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಕಾರ್ಮಿಕ ಸಚಿವ ಸಂತೋಷ್ ಲಾಡ್, ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹಮದ್, ಶಾಸಕ ಪ್ರಿಯಕೃಷ್ಣ ಸೇರಿದಂತೆ ಹಲವರು ಉಪಸ್ಥಿತರಿದ್ದರು.

*********

ನವದೆಹಲಿಯಲ್ಲಿ ನಡೆದ ಗಣರಾಜ್ಯೋತ್ಸವ ಶಿಬಿರ ೨೦೨೬ರಲ್ಲಿ ಕರ್ನಾಟಕ ಮತ್ತು ಗೋವಾ ಎನ್‌ಸಿಸಿ ನಿರ್ದೇಶನಾಲಯ ಸತತವಾಗಿ ಎರಡನೇ ವರ್ಷವು ಪ್ರತಿಷ್ಠಿತ ಪ್ರಧಾನಮಂತ್ರಿಗಳ ಬ್ಯಾನರ್ ಮತ್ತು ಟ್ರೋಫಿಯನ್ನು ಗೆಲ್ಲುವ ಮೂಲಕ ಇತಿಹಾಸ ಸೃಷ್ಟಿಸಿದೆ. ದೇಶದಾದ್ಯಂತ ೧೭ ಎನ್‌ಸಿಸಿ ನಿರ್ದೇಶನಾಲಯಗಳಲ್ಲಿ ಚಾಂಪಿಯನ್ ನಿರ್ದೇಶನಾಲಯವಾಗಿ ಹೊರಹೊಮ್ಮಿದೆ. ಪ್ರಶಸ್ತಿ ಸ್ವೀಕರಿಸಿದ ಕರ್ನಾಟಕ, ಗೋವಾ ಎನ್‌ಸಿಸಿ ನಿರ್ದೇಶನಾಲಯದ ಉಪಮಹಾನಿರ್ದೇಶಕ

ಏರ್ ಕಮೋಡರ್ ಎಸ್.ಬಿ. ಅರುಣ್ ಕುಮಾರ್ ಮಾತನಾಡಿ, ಇದು ನಮ್ಮ ಕೆಡೆಟ್‌ಗಳು ಮತ್ತು ಸಿಬ್ಬಂದಿಯ ವೃತ್ತಿಪರತೆ, ಸ್ಥಿತಿಸ್ಥಾಪಕತ್ವ ಮನೋಭಾವಕ್ಕೆ ಸಾಕ್ಷಿಯಾಗಿದೆ. ಈ ಯಶಸ್ಸು ಕಠಿಣ ಪರಿಶ್ರಮ, ನಿಖರ ತರಬೇತಿ, ಅಚಲ ಸಮರ್ಪಣೆಯ ಫಲಿತಾಂಶವಾಗಿದೆ ಎಂದು ಹೇಳಿದ್ದಾರೆ.

*********

ದಾವಣಗೆರೆ ಜಿಲ್ಲೆಯಲ್ಲಿ ಪ್ರಸ್ತುತ ೩೮ ಕುಷ್ಠರೋಗ ಪ್ರಕರಣಗಳಿದ್ದು, ಆರೋಗ್ಯ ಇಲಾಖೆಯ ಎಲ್ಲಾ ವೈದ್ಯಾಧಿಕಾರಿಗಳು ಸಮನ್ವಯತೆಯಿಂದ ಕಾರ್ಯನಿರ್ವಹಿಸಿ ಜಿಲ್ಲೆಯನ್ನು ಕುಷ್ಠರೋಗ ಮುಕ್ತವಾಗಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಗಿತ್ತೆ ಮಾಧವ ವಿಠಲರಾವ್ ಸೂಚಿಸಿದ್ದಾರೆ. ಜಿಲ್ಲಾ ಪಂಚಾಯಿತಿ ಕಚೇರಿಯಲ್ಲಿ ಆಯೋಜಿಸಲಾಗಿದ್ದ 'ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನ-೨೦೨೬'ರ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಇದೇ ೩೦ರಿಂದ ಫೆಬ್ರವರಿ ೧೩ರವರೆಗೆ ಜಿಲ್ಲೆಯಾದ್ಯಂತ ವಿಶೇಷ ಜಾಗೃತಿ ಅಭಿಯಾನ ನಡೆಯದೆ ಎಂದು ಹೇಳಿದ್ದಾರೆ. ರಾಷ್ಟ್ರೀಯ ಕುಷ್ಠರೋಗ ನಿರ್ಮೂಲನಾ ಕಾರ್ಯಕ್ರಮದಡಿ 'ತಾರತಮ್ಯವನ್ನು ಕೊನೆಗೊಳಿಸುವುದು, ಘನತೆಯನ್ನು ಕಾಪಾಡುವುದು' ಎಂಬ ಘೋಷಣೆಯೊಂದಿಗೆ ಈ ವರ್ಷ ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಸ್ಪರ್ಶ್ ಕುಷ್ಠರೋಗ ಜಾಗೃತಿ ಅಭಿಯಾನವನ್ನು ಇದೇ ೩೦ ರಿಂದ ಫೆಬ್ರವರಿ ೧೩ ವರೆಗೆ ಹಮ್ಮಿಕೊಳ್ಳಲಾಗಿದೆ ಎಂದು ಬೆಂಗಳೂರು ಗ್ರಾಮಾಂತರ ಜಿಲ್ಲಾಧಿಕಾರಿ ಎ.ಬಿ. ಬಸವರಾಜು ತಿಳಿಸಿದ್ದಾರೆ. ಹಾವೇರಿ ಜಿಲ್ಲೆಯಲ್ಲಿ ಇದೇ ೩೦ ರಿಂದ ಫೆಬ್ರವರಿ ೧೩ ರವರೆಗೆ "ಸ್ಪರ್ಶ್ ಕುಷ್ಠರೋಗ ಅರಿವು ಆಂದೋಲನ" ಕಾರ್ಯಕ್ರಮ ಜರುಗಲಿದೆ ಎಂದು ಜಿಲ್ಲಾ ಕುಷ್ಠರೋಗ ನಿರ್ಮೂಲನಾಧಿಕಾರಿ ಡಾ. ಚನಬಸಯ್ಯ ವಿರಕ್ತಮಠ ಮಾಹಿತಿ ನೀಡಿದ್ದಾರೆ. ಶಾಲಾ-ಕಾಲೇಜುಗಳಲ್ಲಿ ವಿವಿಧ ಸ್ಪರ್ಧೆಗಳ ಆಯೋಜನೆ ಮೂಲಕ ಕುಷ್ಠರೋಗ ತಡೆಗೆ ಜಾಗೃತಿ ಮೂಡಿಸಲಾಗುತ್ತದೆ ಎಂದು ತಿಳಿಸಿದ್ದಾರೆ.

****ಧ್ವನಿ**** ಚನಬಸಯ್ಯ ವಿರಕ್ತಮಠ

*********

ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ೨೫ನೆಯ ಎರಡನೇ ಭಾಗದ ವಾರ್ಷಿಕ ಘಟಿಕೋತ್ಸವನ್ನು ಫೆಬ್ರವರಿ ೨ ರಂದು ವಿಶ್ವವಿದ್ಯಾಲಯದ ಆವರಣದಲ್ಲಿ ಆಯೋಜಿಸಲಾಗಿದೆ. ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್ ಘಟಿಕೋತ್ಸವ ಉದ್ಘಾಟಿಸಲಿದ್ದಾರೆ ಎಂದು ಕುಲಪತಿ ಪ್ರೊ. ಎಸ್. ವಿದ್ಯಾಶಂಕರ ತಿಳಿಸಿದ್ದಾರೆ. ಬೆಳಗಾವಿಯಲ್ಲಿಂದು ಸುದ್ದಿಗೋಷ್ಠಿಯಲ್ಲಿ ಮಾಹಿತಿ ನೀಡಿದ ಅವರು, ವಿವಿಧ ಸ್ನಾತಕೋತ್ತರ ಪದವಿ ಪಡೆದ ೮ ಸಾವಿರದ ೭೦೨ ಪದವಿ

ಹಾಗೂ ೨೪೬ ಪಿಎಚ್.ಡಿ ಪದವಿ ಹಾಗೂ ರ್‍ಯಾಂಕ್ ವಿಜೇತರಿಗೆ ಚಿನ್ನದ ಪದಕಗಳ ಪ್ರದಾನ ಮಾಡಲಾಗುವುದು. ಶಿವಮೊಗ್ಗದ ಜವಾಹರಲಾಲ್ ನೆಹರು ನ್ಯಾಷನಲ್ ಇಂಜಿನಿಯರಿಂಗ್ ಕಾಲೇಜಿನ ವಿದ್ಯಾರ್ಥಿನಿ ಅತೀ ಹೆಚ್ಚು ೪ ಹಾಗೂ ಬೆಂಗಳೂರಿನ ಐಟಿ ಕಾಲೇಜಿನ ಕಾವ್ಯ ಎಚ್.ಸಿ. ಮತ್ತು ದಾವಣಗೆರೆಯ ಯುಬಿಡಿಟಿ ಕಾಲೇಜಿನ ಸಂಚಿತಾ ಬಿ.ಎಸ್. ತಲಾ ಮೂರು ಚಿನ್ನದ ಪದಕಗಳನ್ನು ಪಡೆದುಕೊಂಡಿದ್ದಾರೆ. ಬೆಂಗಳೂರಿನ ಐಟಿ ಕಾಲೇಜು ಅತೀ ಹೆಚ್ಚು ೮ ಹಾಗೂ ಮೈಸೂರಿನ ವಿಟಿಯು ಸ್ನಾತಕೋತ್ತರ ಕೇಂದ್ರ ೭ ಚಿನ್ನದ ಪದಕ ಪಡೆದುಕೊಂಡಿವೆ ಎಂದು ಮಾಹಿತಿ ನೀಡಿದ್ದಾರೆ.

*******END******